# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 618 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16/09/2021 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೂಸೈಟಿಗಳು ಎಷ್ಟಿವೆ; ಅವು ಯಾವುವು; (ಇಲಾಖಾವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಈ ಕೆಳಕಂಡ ಮಂಡಳಿಗಳು ಹಾಗೂ ಸೊಸೈಟಿಗಳು ಕಾರ್ಯನಿರ್ವಹಿಸುತ್ತಿವೆ.<br><br>1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br><br>ಕೇಂದ್ರ ಕಛೇರಿಯ ವಿಳಾಸ:<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ<br>ಕಲ್ಯಾಣ ಸುರಕ್ಷಾ ಭವನ<br>ಡೈರಿ ಸರ್ಕಲ್, ಬನ್ನೇರುಘಟ್ಟ ರಸ್ತೆ<br>ಬೆಂಗಳೂರು-560029<br>ದೂರವಾಣಿ ಸಂಖ್ಯೆ: 26644312/313/314,<br>ಇ-ಮೇಲ್ :<br>karbuildworkerswelfare@gmail.com<br><br>2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಕೇಂದ್ರ ಕಛೇರಿಯ ವಿಳಾಸ:<br>ಕಲ್ಯಾಣ ಸುರಕ್ಷಾ ಭವನ,<br>3ನೇ ಮಹಡಿ, ಬನ್ನೇರುಘಟ್ಟ ರಸ್ತೆ,<br>ಬೆಂಗಳೂರು -29.<br>ದೂ: 080-29759983/8883.<br>ಇ-ಮೇಲ್: kuwssb@gmail.com<br>ವೆಬ್‌ಸೈಟ್: ksuwssb.karnataka.gov.in |

| | | |
|---|---|---|
| | | 3. **ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ(ಆಶಾದೀಪ ಯೋಜನೆ)ಸೊಸೈಟಿ,**<br>ಕೇಂದ್ರ ಕಛೇರಿಯ ವಿಳಾಸ:<br>ಕಲ್ಯಾಣ ಸುರಕ್ಷಾ ಭವನ, 3ನೇ ಮಹಡಿ,<br>ಬನ್ನೇರುಘಟ್ಟ ರಸ್ತೆ, ಬೆಂಗಳೂರು–29<br>ದೂ: 080–29759983/8883,<br>ಇ–ಮೇಲ್: **ashadeepa29@gmail.com,**<br>ವೆಬ್‌ಸೈಟ್: **www.ashadeepa.in**<br><br>4. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:–**<br>ಕೇಂದ್ರ ಕಛೇರಿಯ ವಿಳಾಸ:<br>ಕಾರ್ಮಿಕ ಕಲ್ಯಾಣ ಭವನ, ನಂ. 48,<br>2ನೇ ಮಹಡಿ, ಮತ್ತೀಕೆರೆ ಮುಖ್ಯ ರಸ್ತೆ,<br>ಯಶವಂತಪುರ, ಬೆಂಗಳೂರು–560022<br>ದೂರವಾಣಿ: 080–23570266,<br>080–23475188 |
| ಆ) | ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳು ಯಾವುವು (ಯೋಜನಾವಾರು ವಿವರವಾದ ಮಾಹಿತಿ ನೀಡುವುದು) | 1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:–**<br>ಮಂಡಳಿಯಲ್ಲಿ ನೋಂದಾಯಿತರಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಈ ಕೆಳಕಂಡ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಿ ಜಾರಿಗೊಳಿಸಲಾಗುತ್ತಿದೆ. ವಿವರಗಳನ್ನು **ಅನುಬಂಧ–1** ರಲ್ಲಿ ನೀಡಿದೆ.<br><br>2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:–**<br>ಕರ್ನಾಟಕ ರಾಜ್ಯ ಸರ್ಕಾರವು, ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ಸ್ಥಾಪಿಸಿದ್ದು, ಅಸಂಘಟಿತ ಕಾರ್ಮಿಕರಿಗೆ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:–**<br>ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | | **(ಅ) ಅಪಘಾತ ಪರಿಹಾರ ಸೌಲಭ್ಯ :**<br>ಯೋಜನೆಯಡಿ, ಅಪಘಾತದಿಂದಾದ ಮರಣ ಪ್ರಕರಣಗಳಲ್ಲಿ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುವುದು.<br>ಈವರೆಗೆ 918 ಅಪಘಾತ ಪ್ರಕರಣಗಳಲ್ಲಿ ರೂ.29.29 ಕೋಟಿಗಳ ಅಪಘಾತ ಪರಿಹಾರವನ್ನು ವಿತರಿಸಲಾಗಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ :**<br>ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. ಈವರೆಗೆ 520 ಫಲಾನುಭವಿ ವಿದ್ಯಾರ್ಥಿಗಳಿಗೆ ಒಟ್ಟು ರೂ.52,00,000/-ಗಳ ಶೈಕ್ಷಣಿಕ ಧನ ಸಹಾಯವನ್ನು ವಿತರಿಸಲಾಗಿದೆ.<br><br>**(ಇ) ಸ್ಮಾರ್ಟ್ ಕಾರ್ಡ್ ಸೌಲಭ್ಯ :**<br>ಯೋಜನೆಯ ಕುರಿತು ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸಲು ಎಲ್ಲಾ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>**(ಈ) ಶ್ರಮ ಸಮ್ಮಾನ ಪ್ರಶಸ್ತಿ :**<br>ಪ್ರತಿ ವರ್ಷ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ ತ್ರಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಚಾಲಕರಿಗೆ ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು ರಾಜ್ಯಾದ್ಯಂತ 660 ಚಾಲಕರಿಗೆ "ಶ್ರಮ |
| | | ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ.<br><br>**(ಈ) ಅಪಘಾತ ಜೀವ ರಕ್ಷಕ:-**<br>ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ಸ್ವಯಂಸೇವಕರನ್ನು ಸೃಷ್ಟಿಸುವ ಉದ್ದೇಶದಿಂದ ಅಪಘಾತ ಜೀವರಕ್ಷಕ ಕಾರ್ಯಕ್ರಮದಡಿ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿಯನ್ನು ನೀಡಲಾಗುತ್ತಿದೆ. |

(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-

(ಅ) ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ಸೇರಿದಂತೆ, ಈವರೆಗೆ ಒಟ್ಟು 2,16,900 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿರುತ್ತದೆ.

(ಆ) ಶ್ರಮ ಸಮ್ಮಾನ ಪ್ರಶಸ್ತಿ :

ಪ್ರತಿ ವರ್ಷ, ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ವರ್ಗಗಳಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರನ್ನು ಗುರುತಿಸಿ, ಪ್ರತಿಯೊಂದು ಜಿಲ್ಲೆಗೆ ಪ್ರತಿಯೊಂದು ವರ್ಗಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು 3630 ಕಾರ್ಮಿಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ.

(ಇ) ಕಾರ್ಮಿಕ ಸೇವಾ ಕೇಂದ್ರ :-

ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 9ರನ್ವಯ ಫಲಾನುಭವಿಗಳಲ್ಲಿ ಅಸಂಘಟಿತ ಕಾರ್ಮಿಕರಿಗೆ ಲಭ್ಯವಿರುವ ಎಲ್ಲಾ ಯೋಜನೆಗಳ ಕುರಿತು ಮಾಹಿತಿ ನೀಡಲು, ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಅವಶ್ಯಕವಿರುವ ದಾಖಲಾತಿಗಳನ್ನು ಸಿದ್ಧಪಡಿಸಲು ಹಾಗೂ ನಿಗಧಿಪಡಿಸಿದ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಪಟ್ಟವರಿಗೆ ರವಾನಿಸಲು ಸಹಾಯವಾಗುವಂತೆ ರಾಜ್ಯದ ಎಲ್ಲಾ 175 ತಾಲ್ಲೂಕುಗಳಲ್ಲಿ ತಲಾ ಒಂದರಂತೆ ಕಾರ್ಮಿಕ ಸೇವಾ ಕೇಂದ್ರಗಳನ್ನು ಹಾಗೂ ಬೆಂಗಳೂರು ವ್ಯಾಪ್ತಿಯಲ್ಲಿ 6 ಕಾರ್ಮಿಕ ಸೇವಾ ಕೇಂದ್ರಗಳು ಸೇರಿ ಒಟ್ಟು 181 ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲು ನಿರ್ಣಯಿಸಿದ್ದು, ಈಗಾಗಲೇ 169 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಕರ್ನಾಟಕ ರಾಜ್ಯ ಸರ್ಕಾರವು, ಖಾಸಗಿ ವಲಯದ ಸಂಸ್ಥೆ/ಕಾರ್ಖಾನೆಗಳಲ್ಲಿ ಪ.ಜಾತಿ ಮತ್ತು ಪ.ಪಂಗಡದ ಅಭ್ಯರ್ಥಿಗಳ ನೇಮಕಾತಿಯನ್ನು ಉತ್ತೇಜಿಸಲು, **"ಆಶಾದೀಪ ಯೋಜನೆ"**ಯನ್ನು ಜಾರಿಗೆ ತಂದಿದ್ದು, **ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ (ಆಶಾದೀಪ ಯೋಜನೆ) ಸೊಸೈಟಿಯ** ಮೂಲಕ ಅನುಷ್ಠಾನಗೊಳಿಸುತ್ತಿದೆ.

ಸದರಿ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ:-

**ಅ) ಮಾಲೀಕರು ಪಾವತಿಸುವ ಇ.ಎಸ್.ಐ. ಮತ್ತು ಇ.ಪಿ.ಎಫ್. ವಂತಿಕೆ ಮರುಪಾವತಿ:-**

ಖಾಸಗಿ ವಲಯದ ಸಂಸ್ಥೆಗಳಲ್ಲಿ ಹೊಸದಾಗಿ ನೇಮಿಸಿಕೊಳ್ಳುವ ಪ.ಜಾತಿ ಮತ್ತು ಪ.ಪಂಗಡದ ಉದ್ಯೋಗಿಗಳಿಗೆ ಮಾಲೀಕರು/ ಉದ್ಯೋಗದಾತರು ಕಡ್ಡಾಯವಾಗಿ ಪಾವತಿಸಿದ ಶಾಸನಬದ್ಧ ಭವಿಷ್ಯನಿಧಿ ಹಾಗೂ ಇ.ಎಸ್.ಐ. ವಂತಿಕೆಯನ್ನು ರಾಜ್ಯ ಸರ್ಕಾರದಿಂದ ಮಾಲೀಕರು/ ಉದ್ಯೋಗದಾತರಿಗೆ ಎರಡು ವರ್ಷಗಳ ಅವಧಿಯ ವರೆಗೆ ಮಾಸಿಕ ಗರಿಷ್ಠ ತಲಾ ರೂ.3000/- ಗಳ ಮಿತಿಯೊಳಗೆ ಮರುಪಾವತಿ.

ಈವರೆಗೆ ಪರಿಶಿಷ್ಟ ಜಾತಿಯ 1017 ಫಲಾನುಭವಿಗಳು ಮತ್ತು ಪರಿಶಿಷ್ಟ ಪಂಗಡದ 467 ಫಲಾನುಭವಿಗಳಿಗೆ ಇ.ಎಸ್.ಐ ಮತ್ತು ಇ.ಪಿ.ಎಫ್ ವಂತಿಕೆಯನ್ನು ಪಾವತಿಸಿದ ಮಾಲೀಕರಿಗೆ ರೂ. 1.02 ಕೋಟಿಗಳನ್ನು ಸೊಸೈಟಿಯಿಂದ ಪಾವತಿಸಲಾಗಿದೆ.

**ಆ) ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳ ಶಿಷ್ಯವೇತನ (Stipend) ಮರುಪಾವತಿ:-**

ಒಂದು ವರ್ಷದ ಅವಧಿಯ ಸಾಮಾನ್ಯ (Normal) ಹಾಗೂ ಎರಡು ವರ್ಷಗಳ ಅವಧಿಯ ಸಮಗ್ರ (Comprehensive) ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಪ.ಜಾತಿ ಮತ್ತು ಪ.ಪಂಗಡದ ಅಭ್ಯರ್ಥಿಗಳಿಗೆ ಅಪ್ರೆಂಟಿಸ್ ಕಾಯ್ದೆ, 1961 ರನ್ವಯ ಪಾವತಿಸಬೇಕಾದ ಮಾಸಿಕ ಶಿಷ್ಯವೇತನ (Stipend) ಮೊತ್ತದಲ್ಲಿ 2/3 ರಷ್ಟು ಮೊತ್ತವನ್ನು ಮಾಸಿಕ ತಲಾ ರೂ.5000/- ಗಳ ಮಿತಿಯೊಳಗೆ ಮರುಪಾವತಿ.

ಈವರೆಗೆ ಪರಿಶಿಷ್ಟ ಜಾತಿಯ 842 ಫಲಾನುಭವಿಗಳು ಮತ್ತು ಪರಿಶಿಷ್ಟ ಪಂಗಡದ 572 ಫಲಾನುಭವಿಗಳಿಗೆ ಇ.ಎಸ್.ಐ ಮತ್ತು ಇ.ಪಿ.ಎಫ್ ವಂತಿಕೆಯನ್ನು ಪಾವತಿಸಿದ ಮಾಲೀಕರಿಗೆ ರೂ. 1.41 ಕೋಟಿಗಳನ್ನು ಸೊಸೈಟಿಯಿಂದ ಪಾವತಿಸಲಾಗಿದೆ.

| | | |
|---|---|---|
| | | <u>ಇ) ಅಪ್ರೆಂಟಿಸ್ ನಂತರ ಖಾಯಂ ಮಾಡಿದಲ್ಲಿ ವೇತನ ಮರುಪಾವತಿ:-</u> ಅಪ್ರೆಂಟಿಸ್ ತರಬೇತಿ ಪಡೆದ ಪ.ಜಾತಿ ಮತ್ತು ಪ.ಪಂಗಡದ ಅಭ್ಯರ್ಥಿಗಳನ್ನೇ ಖಾಯಂ ಹುದ್ದೆಗಳಲ್ಲಿ ನೇಮಕಾತಿ ಮಾಡಿಕೊಂಡಲ್ಲಿ, ಅಂತಹ ನೌಕರರಿಗೆ ಆಯಾ ಹುದ್ದೆಗಳಿಗೆ ಸರ್ಕಾರ ನಿಗದಿಪಡಿಸಿದ ಕನಿಷ್ಠ ವೇತನ ದರದಲ್ಲಿ ಶೇ.50 ರಷ್ಟು ಮೊತ್ತವನ್ನು ಮಾಸಿಕ ಗರಿಷ್ಠ ತಲಾ ರೂ. 7000/-ಗಳ ಮಿತಿಯೊಳಗೆ ಉದ್ಯೋಗದಾತರಿಗೆ ಒಂದು ವರ್ಷದ ಅವಧಿಗೆ ಮರುಪಾವತಿ ಮಾಡಲಾಗುತ್ತದೆ.<br><br>**3. <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-</u>**<br>ಈ ಮಂಡಳಿಯ ವತಿಯಿಂದ ಸಂಘಟಿತ ಕಾರ್ಮಿಕರಿಗೆ ಈ ಕೆಳಕಂಡ ಯೋಜನೆಗಳನ್ನು ನೀಡಲಾಗುತ್ತಿದೆ.<br><br>**1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**<br>**2) ಕಾರ್ಮಿಕರಿಗೆ ವೈದ್ಯಕೀಯ ನೆರವು**<br>**3) ಕಾರ್ಮಿಕರಿಗೆ ಅಪಘಾತ ಧನ ಸಹಾಯ**<br>**4) ಹೆರಿಗೆ ಭತ್ಯೆ ಸೌಲಭ್ಯ**<br>**5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**<br>**6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ**<br>**7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ**<br><br>ಯೋಜನಾವಾರು ಮಾಹಿತಿಯನ್ನು **ಅನುಬಂಧ-2**ರಲ್ಲಿ ಲಗತ್ತಿಸಿದೆ. |
| ಇ) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಎಷ್ಟು ಕಾರ್ಮಿಕ ನಿಧಿ ಹಣವಿದೆ; ಇದನ್ನು ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ಬಾಕಿ ಉಳಿದಿರುವ ಹಣವೆಷ್ಟು | **1. <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u>**<br>ಮಂಡಳಿಯ ಕಲ್ಯಾಣ ನಿಧಿಯಲ್ಲಿ 2007 ರಿಂದ ಇಲ್ಲಿಯವರೆಗೆ ರೂ.10,675.29 ಕೋಟಿಯಷ್ಟು (ಸುಂಕ ಸಂಗ್ರಹಣೆ, ನಿಶ್ಚಿತ ಠೇವಣಿಯಿಂದ ಬಂದ ಬಡ್ಡಿ, ಉಳಿತಾಯ ಖಾತೆಯಿಂದ ಬಂದ ಬಡ್ಡಿ, ನೋಂದಣಿ ಮತ್ತು ನವೀಕರಣದ ಶುಲ್ಕ ಸೇರಿದಂತೆ) ಮೊತ್ತವು ಸಂಗ್ರಹವಾಗಿರುತ್ತದೆ.<br><br>ಮಂಡಳಿಯಲ್ಲಿ ಸಂಗ್ರಹವಾದ ಕಲ್ಯಾಣ ನಿಧಿ ಮೊತ್ತವನ್ನು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರ ಕಲಂ 24(2)ರ ಪ್ರಾವಧಾನಗಳನ್ವಯ ಮಂಡಳಿ ನಿಧಿಯನ್ನು ಬಳಸಲಾಗುತ್ತಿದೆ.<br><br>ಮಂಡಳಿಯ ವಿವಿಧ ಸೌಲಭ್ಯಗಳು ಮತ್ತು ಯೋಜನೆಗಳನ್ನು ಮಂಡಳಿಯ ಫಲಾನುಭವಿಗಳಿಗೆ ವಿಲೇವಾರಿಗಾಗಿ ಮತ್ತು |

| | | |
|---|---|---|
| | | ನೀಡಲು 2007 ರಿಂದ ಇಲ್ಲಿಯವರೆಗೆ ರೂ.3451.58 ಕೋಟಿಗಳಷ್ಟು ಖರ್ಚು ಮಾಡಿದ್ದು, ರೂ.7224.34 ಕೋಟಿಯಷ್ಟು ಮೊತ್ತ ಉಳಿದಿರುತ್ತದೆ.<br><br>2. **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-</u>**<br>ಈ ಮಂಡಳಿಗೆ ಕಾರ್ಮಿಕ ಮತ್ತು ಮಾಲೀಕರ ರೂ. 20:40 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ರೂ. 60/- ರಂತೆ ವರ್ಷಕ್ಕೆ ಒಂದು ಬಾರಿ ಸಂಘಟಿತ ಕಾರ್ಮಿಕರು ವಂತಿಗೆ ಪಾವತಿ ಮಾಡುತ್ತಿದ್ದು ಇದುವರೆಗೂ ಮಂಡಳಿಯಲ್ಲಿ ಕಾರ್ಮಿಕ ಕಲ್ಯಾಣ ನಿಧಿ ರೂ. 141.90-00 ಕೋಟಿಗಳು ಸಂಗ್ರಹವಾಗಿರುತ್ತದೆ.<br>ಮಂಡಳಿಗೆ ವಂತಿಗೆ ಪಾವತಿಸುವ ಕಾರ್ಖಾನೆಗಳು/ ಕಾರ್ಯ ಸಂಸ್ಥೆಗಳ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಮಂಡಳಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಕಲ್ಯಾಣ ಯೋಜನೆಗಳು, ಆಡಳಿತಾತ್ಮಕ ವೆಚ್ಚ ಮತ್ತು ಮಂಡಳಿ ಆಸ್ತಿ ಅಭಿವೃದ್ಧಿಗಾಗಿ ಮಂಡಳಿ ಸಭೆಯ ನಿರ್ಣಯದಂತೆ ಖರ್ಚು ಮಾಡಲಾಗುತ್ತದೆ.<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಯೋಜನೆಗಳಡಿಯಲ್ಲಿ 27557 ಫಲಾನುಭವಿಗಳಿಗೆ ರೂ. 10.68-00 ಕೋಟಿ ವೆಚ್ಚ ಮಾಡಿರುತ್ತದೆ.<br>ಕಛೇರಿ ಆಡಳಿತಾತ್ಮಕ ವೆಚ್ಚ ರೂ. 8.55-00 ಕೋಟಿ ವೆಚ್ಚ ಮಾಡಿರುತ್ತದೆ.<br>ಒಟ್ಟು ರೂ. 19.23-00 ಕೋಟಿ ವೆಚ್ಚ ಮಾಡಲಾಗಿರುತ್ತದೆ. ಉಳಿದ ಹಣ ರೂ. 122.67-00 ಕೋಟಿ ಆಗಿರುತ್ತದೆ. ಇದನ್ನು ವಿವಿಧ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಠೇವಣಿ ಇರಿಸಲಾಗಿದೆ. |
| ಈ) | ಕಾರ್ಮಿಕ ಸಹಾಯ ಹಸ್ತ ಯೋಜನೆ ಜಾರಿಯಲ್ಲಿದೆಯೇ: ಇದರ ಸಂಬಂಧ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ: ತುಮಕೂರು <u>ಜಿಲ್ಲೆಯಲ್ಲಿ ಈ ಯೋಜನೆಗೆ ನೇಮಕ</u> ಮಾಡಿಕೊಂಡಿರುವವರ ಹೆಸರು ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು. | 1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ' ಎಂಬ ಶೀರ್ಷಿಕೆಯಡಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ <u>ಕಾರ್ಮಿಕರ ಕಲ್ಯಾಣ ಮಂಡಳಿ</u> ಹಾಗೂ <u>ಕರ್ನಾಟಕ ರಾಜ್ಯ</u> ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಒಗ್ಗೂಡಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br>ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಗೊಂಡ "ಕಾರ್ಮಿಕ ಬಂಧುಗಳು" ಕಾರ್ಮಿಕರ ನೋಂದಣಿ ಮತ್ತು ಅವರಿಗೆ ಮಂಡಳಿಯ ಸೌಲಭ್ಯಗಳನ್ನು ತಲುಪಿಸಲು ಇಲಾಖೆ ಮತ್ತು ಕಾರ್ಮಿಕರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. |

| | | |
|---|---|---|
| | | ಈ ಸಂಬಂಧ 1086 ಕಾರ್ಮಿಕ ಬಂಧುಗಳನ್ನು ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಮಾಡಿಕೊಳ್ಳಲಾಗಿತ್ತು, ಅದರಲ್ಲಿ ಪ್ರಸ್ತುತ 323 ಕಾರ್ಮಿಕ ಬಂಧುಗಳು ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.<br><br>ತುಮಕೂರು ಜಿಲ್ಲೆಯಲ್ಲಿ ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ 62 ಕಾರ್ಮಿಕ ಬಂಧುಗಳು ನೇಮಕ ಮಾಡಿ ಕೊಂಡಿದ್ದು ಅದರಲ್ಲಿ ಪ್ರಸ್ತುತ 15 ಮಂದಿ ಕಾರ್ಮಿಕ ಬಂಧುಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದು ಸದರಿಯವರ ಮಾಹಿತಿಯನ್ನು **ಅನುಬಂಧ-3** ರಲ್ಲಿ ಒದಗಿಸಿದೆ. |
| ಉ) | ಇವರಿಗೆ ಸರ್ಕಾರವು ನೀಡುತ್ತಿರುವ ಸಹಾಯ ಪ್ರೋತ್ಸಾಹ ಧನವೆಷ್ಟು? | **1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಕಾರ್ಮಿಕ ಬಂಧುಗಳು ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಗೊಂಡು ಅವರು ಮಂಡಳಿಯ ಯೋಜನೆಯನ್ನು ಫಲಾನುಭವಿಗೆ ತಲುಪಿಸಿದಾಗ ಇವರುಗಳಿಗೆ ಸರ್ಕಾರಿ ಆದೇಶ ಸಂಖ್ಯೆ ಕಾಇ 467 ಎಲ್‌ಇಟಿ 2017 ಬೆಂಗಳೂರು ದಿನಾಂಕ 24-09-2018 ರ ಆದೇಶದನ್ವಯ ಪ್ರಸ್ತುತ ಕಮೀಷನ್ ನೀಡಲಾಗುತ್ತಿದೆ. ಪ್ರಸ್ತುತ ನೀಡುತ್ತಿರುವ ಕಮೀಷನ್ ಮಾಹಿತಿಯನ್ನು **ಅನುಬಂಧ-4** ರಲ್ಲಿ ಒದಗಿಸಿದೆ. |

**ಕಾಇ 378 ಎಲ್‌ಇಟಿ 2021**

*(ಅರಬೈಲ್ ಶಿವರಾಂ ಹೆಬ್ಬಾರ್)*
**ಕಾರ್ಮಿಕ ಸಚಿವರು**

## ಅನುಬಂಧ–1

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.**1000/-
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯ ಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ ( ಈ ಯೋಜನೆಯನ್ನು ಜಾರಿಗೊಳಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ **ರೂ.** 30,000/- ಮತ್ತು ಗಂಡು ಮಗುವಿನ ಜನನಕ್ಕೆ**ರೂ.**20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | **ತರಗತಿ (ಉತ್ತೀರ್ಣಕ್ಕೆ)** | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |

| | | |
|---|---|---|
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9. | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| | **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | **ಸದರಿ<br>ಕೋರ್ಸ್‌ನ ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000** |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | **ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕ ರೂ. 60,000** |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | **ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು )** |
| | ಎಮ್‌ಡಿ | **ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು)** |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>**ರೂ. 25,000 (ಯೂಜಿಸಿಯ<br>ಜೂನಿಯರ್ ರಿಸರ್ಚ್ ಪೆಲೋಶಿಪ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ** |

| | | |
|---|---|---|
| | | **ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.** |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | **ಪಾವತಿಸಿದ ಬೋಧನಾ ಶುಲ್ಕ** |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**
13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿ**ರೂ.5,00,000/-**, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ)**: ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.

## ಅನುಬಂಧ-2

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

### ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಯೋಜನೆಗಳ ವಿವರ:

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

**ಸೂಚನೆ :**

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ. 20 : 40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.
2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ಸಂಸ್ಥೆಗಳು www.klwb.karnataka.gov.in ಇಲ್ಲಿ ನೊಂದಾಯಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು www.klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

**ಈ ಕೆಳಗಿನ ಯೋಜನೆಗಳಿಗೆ ಮಾಸಿಕ ವೇತನ ರೂ. 21,000/- ಗಿಂತ ಮೀರಿರಬಾರದು. ವಯೋಮಿತಿ 18- 60**

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ: ಪ್ರೌಢ ಶಾಲೆ,** (8 ರಿಂದ 10ನೇ ತರಗತಿವರೆಗೆ) ರೂ.3,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.4,000/-ಪದವಿ ಶಿಕ್ಷಣಕ್ಕಾಗಿ ರೂ.5,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.6,000/-ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು.**(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ.ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**

2. **ಕಾರ್ಮಿಕರಿಗೆ ವೈದ್ಯಕೀಯ ನೆರವು :** ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ **ರೂ. 1,000/-**ದಿಂದ ಗರಿಷ್ಠ **ರೂ.25,000/-**ವರೆಗೆ ಮತ್ತು ಆರೋಗ್ಯ ತಪಾಸಣೆಗೆ **ರೂ. 500/-**ರಿಂದ **ರೂ. 1000/-**ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರಿಗೆ ಅಪಘಾತ ಧನ ಸಹಾಯ :** ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ **ರೂ. 1,000/-** ಗರಿಷ್ಠ **ರೂ. 10,000/-** ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. **ಹೆರಿಗೆ ಭತ್ಯೆ ಸೌಲಭ್ಯ :** ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ **ರೂ. 10,000/-**

ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

**ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18– 60**

5. **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ** :ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ ಆರು ತಿಂಗಳೊಳಗೆ ನಿಗದಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ. **10,000/–** ಧನ ಸಹಾಯ ನೀಡಲಾಗುವುದು.

6. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ. **1,00,000/–** ಧನ ಸಹಾಯ ನೀಡಲಾಗುವುದು.

7. **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. **1,00,000/–** ಧನ ಸಹಾಯ ನೀಡಲಾಗುವುದು.

**ಧನ ಸಹಾಯವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್ ಮೂಲಕ ಜಮಾ ಮಾಡಲಾಗುವುದು.**

## ಅನುಬಂಧ-3

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

### ತುಮಕೂರು ಜಿಲ್ಲೆಯಲ್ಲಿ ಪ್ರಸ್ತುತ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕ ಬಂದುಗಳ ವಿವರ

| ಕ್ರ.ಸಂ | ಕಾರ್ಮಿಕ ಬಂಧುಗಳ ಹೆಸರು | ಗ್ರಾಮ ಪಂಚಾಯತಿ/ ವಾರ್ಡ್ ಹೆಸರು |
|---|---|---|
| 1 | ನರಸಿಂಹಮೂರ್ತಿ ಬಿ.ಜಿ ಬಿನ್ ಗಂಗನರಸಯ್ಯ | ಬೇಗೂರು ಗ್ರಾಮ ಪಂಚಾಯತ್, ಕುಣಿಗಲ್ |
| 2 | ನಂಜುಂಡಸ್ವಾಮಿ ಬಿನ್ ರಂಗಯ್ಯ | ಸಾಸಲು ಗ್ರಾಮ ಪಂಚಾಯತ್, ತುರುವೇಕೆರೆ |
| 3 | ನರಸಿಂಹಾರಜು ಎನ್.ಡಿ ಬಿನ್ ದ್ಯಾವರಪ್ಪ | ನೀರಕಲ್ಲು ಗ್ರಾಮ, ಮಧುಗಿರಿ |
| 4 | ರಮೇಶ್ ಆರ್. ಬಿನ್ ರಾಮಣ್ಣ | ಅರಸಾಪುರ ಗ್ರಾಮ , ಕೊರಟಗೆರೆ |
| 5 | ಪ್ರದೀಪ್ ಕುಮಾರ್ | ಶಿರಾ ಟೌನ್, ಶಿರಾ |
| 6 | ಪುರುಷೋತ್ತಮ್. ವಿ | ಜ್ಯೋತಿನಗರ, ಶಿರಾ |
| 7 | ಐಶ್ವರ್ಯ ಸಿ. ಬಿನ್ ಚಿಕ್ಕಣ್ಣ .ಎಚ್ | ಸಾರ್ಥವಳ್ಳಿ, ತಿಪಟೂರು |
| 8 | ಶ್ರೀಮತಿ ಭಾಗ್ಯ ಲಕ್ಷ್ಮೀ | ಪಾವಗಡ |
| 9 | ಶಿವ ಕುಮಾರ್ ಎ ಬಿನ್ ಆನಂದ್ ಗೌಡ | ವಾರ್ಡ್ ನಂ-22, ತುಮಕೂರು |
| 10 | ಆನಂದ್.ಕೆ ಬಿನ್ ಕೃಷ್ಣಪ್ಪ | ಪಾಲಸಂದ್ರ ಗ್ರಾಮ ಪಂಚಾಯಿತಿ ತುಮಕೂರು |
| 11 | ಹೇಮಾವತಿ ಕೋಂ ಬಿ ಹೆಚ್ ರಾಜು | ಸ್ವಾಂದೆನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು |
| 12 | ರಾಕೇಶ್ ಎಸ್ ಬಿನ್ ಸುರೇಶ | ಹೆಗ್ಗೆರೆ ಗ್ರಾಮ ಪಂಚಾಯಿತಿ, ತುಮಕೂರು |
| 13 | ನಂಜೇಶ್ ಬಿನ್ ಲೇಟ್ ರಾಜಣ್ಣ | ಅಮೃತೂರು ಗ್ರಾಮ ಪಂಚಾಯಿತಿ, ಕುಣಿಗಲ್ |
| 14 | ಹಟ್ಟಿ ರಂಗಯ್ಯ ಆರ್. ಎನ್ ಬಿನ್ ನಂಜಪ್ಪ | ಮಡಿಕೆಹಳ್ಳಿ ಗ್ರಾಮ ಪಂಚಾಯಿತಿ, ಕುಣಿಗಲ್ |
| 15 | ನರಸಿಂಹಮೂರ್ತಿ ಬಿನ್ ಕದರಯ್ಯ | ದೊಡ್ಡಗುಣಿ ಗ್ರಾಮ ಪಂಚಾಯತ್, ಗುಬ್ಬಿ |

## ಅನುಬಂಧ-4

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಾರ್ಮಿಕ ಬಂಧುಗಳಿಗೆ ನೀಡುತ್ತಿರುವ ಕಮೀಷನ್ ಮೊತ್ತದ ವಿವರ

| ಕ್ರಮ ಸಂಖ್ಯೆ | ವಿವರ | ಪ್ರಸ್ತಾಪಿತ ಕಮೀಷನ್ ದರ |
|---|---|---|
| 1 | ಸಮೀಕ್ಷೆ ಹಾಗೂ ನೋಂದಣಿ ಸೇರಿದಂತೆ ಸ್ಮಾರ್ಟ್ ಕಾರ್ಡ್ ಪೂರ್ಣ ವಿತರಣೆ | ರೂ.25/- ಪ್ರತಿ ನೋಂದಣಿಗೆ |
| 2 | ಸಮೀಕ್ಷೆ ಹಾಗೂ ಸದಸ್ಯತ್ವ ನವೀಕರಣ ಅಥವಾ ಬದಲಿಸುವಿಕೆ (ಸ್ಮಾರ್ಟ್ ಕಾರ್ಡ್ ಅಥವಾ ಗುರುತಿನ ಪತ್ರವನ್ನು ಕಳೆದುಕೊಂಡಲ್ಲಿ/ ಹಾನಿಗೊಳಗಾದಲ್ಲಿ) | ರೂ.10/- ಪ್ರತಿ ನವೀಕರಣ ಅಥವಾ ಬದಲಾವಣೆಗೆ |
| 3 | ವಂತಿಗೆ ಅಥವಾ ಚಂದಾ ಶುಲ್ಕ ಸಂಗ್ರಹಣೆ | ವಂತಿಗೆ ಅಥವಾ ಚಂದಾ ಶುಲ್ಕ ಸಂಗ್ರಹಣೆಯ ಶೇ.2 |
| 4 | ಕ್ಲೇಮ್ ನಮೂನೆ ಸಲ್ಲಿಕೆ ಪ್ರಕ್ರಿಯೆ ಹಾಗೂ ಶುಲ್ಕ ಸಂಗ್ರಹಣೆ, ಎಲ್ಲಾ ಕ್ಲೇಮ್ ಅರ್ಜಿಗಳನ್ನು ಪಡೆಯುವುದು ಹಾಗೂ ಸೌಲಭ್ಯ ತಲುಪಿಸುವುದು. | ರೂ.2/- ಪ್ರತಿ ನಮೂನೆಗೆ |
| 5 | ಕ್ಲೇಮ್ ಅರ್ಜಿಗಳ ಸಂಸ್ಕರಣೆ ಮತ್ತು ಫಲಾನುಭವಿಗಳಿಗೆ ಸೌಲಭ್ಯ ತಲುಪಿಸುವುದು. | ಮಂಜೂರಾದ ಪರಿಹಾರ ಮೊತ್ತದ ಶೇ.2ರಷ್ಟು |
| 6 | IEC ಚಟುವಟಿಕೆಗಳು ಹಾಗೂ ತರಬೇತಿಗೆ ಅಥವಾ ಕೌಶಲ್ಯ ಅಭಿವೃದ್ಧಿಗೆ ಕಾರ್ಮಿಕರ ನೋಂದಣಿ. | ರೂ.50/- ಪ್ರತಿ ನೋಂದಣಿಗೆ |
| 7 | ಕಟ್ಟಡ ಕಾಮಗಾರಿಗಳ ಸಮೀಕ್ಷೆ ಹಾಗೂ ಸ್ಥಳೀಯ ಸಂಸ್ಥೆಗಳಿಂದ ಕಟ್ಟಡ ನಿರ್ಮಾಣದ ಆದೇಶದ ಪ್ರತಿ ಸಂಗ್ರಹಣೆ | ರೂ.10/- ಪ್ರತಿ ದಾಖಲೆಗೆ |